ಕರ್ನಾಟಕ ವಿಧಾನ ಪರಿಷತ್ತು

1. ಮಾನ್ಯ ಸದಸ್ಯರ ಹೆಸರು : ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
2. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 610(647)
3. ಉತ್ತರಿಸಬೇಕಾದ ದಿನಾಂಕ : 17.12.2021
4. ಉತ್ತರಿಸುವ ಸಚಿವರು : ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕ್ರ.ಸಂ.	ಪ್ರಶ್ನೆ	ಉತ್ತರ
(ಅ)	ರಾಜ್ಯದಲ್ಲಿ ಕಿರಿಯ ಇಂಜಿನಿಯರ್‌ಗಳಿಗೆ ಸಹಾಯಕ ಇಂಜಿನಿಯರ್-1 ಬಡ್ತಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; (ವಿವರ ನೀಡುವುದು)	ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖಾ ವ್ಯಾಪ್ತಿಯ ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿನ ಅವಕಾಶದ ಅನುಸಾರ ಬಿ.ಇ. ವಿದ್ಯಾರ್ಹತೆ ಹೊಂದಿದ ಕಿರಿಯ ಇಂಜಿನಿಯರ್ ಗಳಿಗೆ ಜೇಷ್ಠತೆಯ ಅನುಸಾರ ಸಹಾಯಕ ಇಂಜಿನಿಯರ್-1 ಹುದ್ದೆಗೆ ಮುಂಬಡ್ತಿ ನೀಡುವ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.
(ಆ)	ಹಾಗಾದಲ್ಲಿ ಸಹಾಯಕ ಇಂಜಿನಿಯರ್-1 ಎಷ್ಟು ಹುದ್ದೆಗಳು ಖಾಲಿ ಇವೆ ಅವುಗಳಲ್ಲಿ ನೇರ ನೇಮಕಾತಿ ಹಾಗೂ ಬಡ್ತಿಗೆ ಮೀಸಲಿಟ್ಟ ಹುದ್ದೆಗಳೆಷ್ಟು; (ಪೂರ್ಣ ವಿವರ ನೀಡುವುದು)	ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಗೆ ಒಟ್ಟು 205 ಸಹಾಯಕ ಇಂಜಿನಿಯರ್-1 ಹುದ್ದೆಗಳು ಮಂಜೂರಾಗಿದ್ದು, ಈ ಪೈಕಿ ಹಾಲಿ 75 ಹುದೆಗಳು ಖಾಲಿ ಇರುತ್ತವೆ. ವೃಂದ ಮತ್ತು ನೇಮಕಾತಿ ನಿಯಮಗಳನುಸಾರ ಈ ಹುದ್ದೆಗಳ ಪೈಕಿ ಶೇ. 75ರಷ್ಟು ನೇರ ನೇಮಕಾತಿಗೆ ಮತ್ತು ಶೇ. 25ರಷ್ಟು ಬಿ.ಇ. ವಿದ್ಯಾರ್ಹತೆ ಹೊಂದಿದ ಕಿರಿಯ ಇಂಜಿನಿಯರ್ ಗಳಿಗೆ ಮುಂಬಡ್ತಿ ಮೂಲಕ ತುಂಬಲು ಅವಕಾಶವಿರುತ್ತದೆ. ಗ್ರಾಮೀಣ ಕುಡಿಯುವ ನೀರು & ನೈರ್ಮಲ್ಯ ಇಲಾಖೆಯಲ್ಲಿ ಒಟ್ಟು 394 ಸಹಾಯಕ ಇಂಜಿನಿಯರ್-ಗ್ರೇಡ್-1 ಹುದ್ದೆಗಳು

		ಮಂಜೂರು ಆಗಿರುತ್ತವೆ. ಈ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಅವಕಾಶ ಕಲ್ಪಿಸ ಲಾಗಿದೆ. ಈ ಪೈಕಿ 188 ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ.

..2

(ಇ)	ಹಾಗಿದ್ದಲ್ಲಿ, ಸಹಾಯಕ ಇಂಜಿನಿಯರ್-1 ಬಡ್ತಿಗೆ ಬಿ.ಇ. ಪದವಿ ಪಡೆದ ಅರ್ಹರಾಗಿರುವ ನೌಕರರ ಸಂಖ್ಯೆ ಎಷ್ಟು; (ಪಟ್ಟಿಯೊಂದಿಗೆ ಪೂರ್ಣ ಮಾಹಿತಿ ನೀಡುವುದು)	ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ಬಿ.ಇ. ವಿದ್ಯಾರ್ಹತೆ ಹೊಂದಿರುವ ಕಿರಿಯ ಇಂಜಿನಿಯರ್‌ಗಳಿಗೆ ಮಾಹಿತಿಯನ್ನು ನೀಡಲು ತಿಳಿಸಲಾಗಿದ್ದು, ಇನ್ನು ಸಂಪೂರ್ಣ ಮಾಹಿತಿ ಸ್ವೀಕೃತವಾಗಿರುವುದಿಲ್ಲ. ಮಾಹಿತಿ ಬಂದ ನಂತರ ಈ ದಿಸೆಯಲ್ಲಿ ಕ್ರಮ ವಹಿಸಲಾಗುವುದು.
(ಈ)	ಹಾಗಾದಲ್ಲಿ, ಸದ್ಯ ನೇರ ನೇಮಕಾತಿ ಪ್ರಕ್ರಿಯೆ ಇಲ್ಲದಿರುವುದರಿಂದ ಬಡ್ತಿ ಮೂಲಕವೇ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಕ್ರಮಕೈಗೊಳ್ಳುವುದೇ? (ಮಾಹಿತಿ ನೀಡುವುದು)	ವೃಂದ ಮತ್ತು ನೇಮಕಾತಿ ನಿಯಮಗಳಲ್ಲಿ ಕಲ್ಪಿಸಿರುವ ಅವಕಾಶದ ಅನುಸಾರ ನೇರ ನೇಮಕಾತಿ ಮತ್ತು ಮುಂಬಡ್ತಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗುವುದು.

ಗ್ರಾಅಪ 137 ಜಡ್‌ಪಿಎ 2021

(ಕೆ.ಎಸ್.ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು

ಕೆ.ಎಸ್. ಈಶ್ವರಪ್ಪ
ಗ್ರಾಮೀಣಾಭಿವೃದ್ಧಿ ಮತ್ತು
ಪಂಚಾಯತ್ ರಾಜ್ ಸಚಿವರು